ಬಸವ ಕಲ್ಯಾಣದಲ್ಲಿ ಸುಸಜ್ಜಿತ ಬಸ್ ನಿಲ್ದಾಣ ಕಟ್ಟಡ ಕಟ್ಟಿಸುವ ಬಗ್ಗೆ

೨೪೦ ಶ್ರೀ ಬಸವರಾಜ್ ಪಾಟೀಲ್.—(ಬಸವ ಕಲ್ಯಾಣ)ಮಾನ್ಯ ರಾಜ್ಯ ಸಾರಿಗೆ ಮಂತ್ರಿಗಳು ಈ ಕೆಳಗೆ ಕಂಡ ಪ್ರಶ್ನೆಗಳನ್ನು ಉತ್ತರಿಸುವರೆ ?

ಅ) ಬಸವ ಕಲ್ಯಾಣದಲ್ಲಿ ಸುಸಜ್ಜಿತ ಬಸ್ ನಿಲ್ದಾಣ ಕಟ್ಟಡ ನಿರ್ಮಾಣವಿಲ್ಲದಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಸುಸಜ್ಜಿತ ಬಸ್ ನಿಲ್ದಾಣಕ್ಕೆ ತಗಲುವ ಅಂದಾಜು ವೆಚ್ಚ ಹಾಗೂ ಈ ಕೆಲಸವನ್ನು ಯಾವಾಗ ಕೈಕೊಳ್ಳಲಾಗುವುದು ?

ಇ) ಈ ಜಿಲ್ಲೆಯಲ್ಲಿ ಇನ್ನುಳಿದ ಎಷ್ಟು ತಾಲ್ಲೂಕುಗಳಲ್ಲಿ ಬಸ್ ನಿಲ್ದಾಣಗಳಾಗಿಲ್ಲ ಅವು ಯಾವುವು. ಇದರ ಬಗ್ಗೆ ಸರ್ಕಾರದ ಮುಂದಿನ ಕ್ರಮಗಳೇನು ?

ಶ್ರೀ ಎಂ. ಪಿ. ಪ್ರಕಾಶ್(ಮಾನ್ಯ ಸಾರಿಗೆ ರಾಜ್ಯ ಮಂತ್ರಿಗಳು).—

ಅ) ಬಂದಿದೆ

ಆ) ಸೂಕ್ತ ನಿವೇಶನ ದೊರೆತ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಮತ್ತು ಅಂದಾಜು ಪಟ್ಟಿ ತಯಾರಿಸಲಾಗುವುದು.

ಈ) ಬೀದರ್ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿಯೂ ಬಸ್ ನಿಲ್ದಾಣಗಳನ್ನು ಕಟ್ಟಲಾಗಿದೆ.

*

ಉಪಾಧ್ಯಕ್ಷರು.—ಪ್ರಶ್ನೋತ್ತರಗಳು ಮುಗಿಯಿತು.

ಚುಕ್ಕೆ ಗುರುತ್ತಿಲ್ಲದ ಪ್ರಶ್ನೆಗಳಿಗೆ ಕೊಡಲಾದ ಲಿಖಿತ ಉತ್ತರಗಳು

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಹಾಗೂ ಸಂಸದೀಯ ವ್ಯವಹಾರ ಮಂತ್ರಿಗಳು).—ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪದಿಮೂರನೆಯ ಪಟ್ಟಿಯನ್ನು ಸಭೆಯ ಮುಂದಿಡುತ್ತೇನೆ.

ಜೋಗ ಜಲಪಾತದಲ್ಲಿ ನೀರು ಬತ್ತಿ ಹೋಗುತ್ತಿರುವುದು

೮೧ ಶ್ರೀ ಎಲ್. ಟಿ. ತಿಮ್ಮಪ್ಪ ಹೆಗ್ಗಡೆ (ಸಾಗರ).—ವಾರ್ತಾ, ಪ್ರಚಾರ ಹಾಗೂ ಪ್ರವಾಸೋದ್ಯಮ ಮಂತ್ರಿಗಳು ಈ ವಿಷಯಗಳನ್ನು ದಯೆಯಿಟ್ಟು ತಿಳಿಸುವರೆ.—

(ಅ) ಪ್ರಪಂಚದಲ್ಲೆಲ್ಲ ಪ್ರಸಿದ್ಧವಾಗಿರುವ ಜೋಗದ ಜಲಪಾತ ಬೇಸಿಗೆಯಲ್ಲಿ ನೀರಿಲ್ಲದೇ ಬತ್ತಿ ಹೋಗುವುದು ಸರ್ಕಾರದವರ ಗಮನಕ್ಕೆ ಬಂದಿದೆಯೆ ;

(ಆ) ಜೋಗ ಜಲಪಾತ ಮತ್ತು ಈ ಪ್ರದೇಶದಲ್ಲಿನ ತಲಕಳಲೆ ಮತ್ತು ಲಿಂಗನಮಕ್ಕಿ ಜಲಾಶಯಗಳು, ಇಲ್ಲಿನ ನಿಸರ್ಗ ಸೌಂದರ್ಯ ವಿಶ್ವಾದ್ಯಂತ ಪ್ರವಾಸಿಗಳನ್ನು ಆಕರ್ಷಿಸುವ ವಿಚಾರ ಸರಕಾರದವರ ಗಮನಕ್ಕೆ ಬಂದಿದೆಯೇ ;

(ಇ) ಬಹಳ ದೂರದಿಂದ ಪ್ರವಾಸಿಗಳು, ಇಲ್ಲಿಗೆ ಬಂದು ಬತ್ತಿಹೋದ ಜಲಪಾತ ಇಲ್ಲಿನ ವಸತಿ, ಊಟೋಪಚಾರ ಮತ್ತು ಸಂಚಾರ ಸೌಲಭ್ಯಗಳ ಕೊರತೆ ಬಗ್ಗೆ ಬೇಸರಿಸುವ ಕಾರಣ, ನಮ್ಮ ಹೆಮ್ಮೆಯ ಪ್ರವಾಸಿ ಕೇಂದ್ರ ತನ್ನ ಸೌಂದರ್ಯ ಮತ್ತು ಆಕರ್ಷಣೆ ಕಳೆದುಕೊಂಡಿರುವುದು ನಿಜವೆ ;

(ಈ) ಹಾಗಿದ್ದಲ್ಲಿ, ಈ ಸರ್ಕಾರ ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ?

* *

---

* ಮಾನ್ಯ ಸದಸ್ಯರು ಹಾಜರಿರಲಿಲ್ಲ.

**Reply not received.